ಪಶು ಚಿಕಿತ್ಸಾಲಯ ಪ್ರಾರಂಭಿಸುವುದು

33 (101); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ನೆಲಮಂಗಲ ವಿಧಾನ ಸಭಾ ಕ್ಷೇತ್ರದ ತ್ಯಾಮಗೊಂಡ್ಲು ಹೋಬಳಿ, ಓಬಳಾಪುರ ಗ್ರಾಮಕ್ಕೆ ಒಂದು ಪಶು ಚಿಕಿತ್ಸಾಲಯ ಮತ್ತು ಸೋಂಪುರ ಹೋಬಳಿ ಹಳೆ ನಿಜಗಲ್ ಗ್ರಾಮಕ್ಕೆ ಒಂದು ಪಶು ಚಿಕಿತ್ಸಾಲಯದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಈ ಹೊಸ ಪಶು ಚಿಕಿತ್ಸಾಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) 19ನೇ ಜಾನುವಾರು ಗಣತಿಯಂತೆ ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿ 72323 ಜಾನುವಾರು ಘಟಕಗಳು ಇರುತ್ತವೆ. ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನ ಅನ್ವಯ ಪ್ರತಿ 5000 ಜಾನುವಾರು ಘಟಕಕ್ಕೆ ಒಂದು ಪಶುವೈದ್ಯಕೀಯ ಸಂಸ್ಥೆ ಇರಬೇಕಿದ್ದು. ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿ 15 ಪಶುವೈದ್ಯಕೀಯ ಸಂಸ್ಥೆಗಳು ಅವಶ್ಯಕತೆ ಇದ್ದು ಈಗಾಗಲೇ 22 ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.

ಆ) ಸದ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ.

ಇ) ಈ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ.